**ಪಿ.ಡಬ್ಲೂ-1**

**ಸಾಕ್ಷಿಯನ್ನು ದಿನಾಂಕಃ 13.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಬೌಂಡರಿ ಕಲ್ಲನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದಲ್ಲಿರುವ ಕಲ್ಲನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ಮುದ್ದೆ ಮಾಲು-1 ಎಂದು ಗುರುತಿಸಲಾಯಿತು. ನಾನು ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿಗಳು ಈ ದಿನ ನ್ಯಾಯಾಲಯದಲ್ಲಿರುತ್ತಾರೆ.

**ಪಾಟೀಸವಾಲುಃ ಆರೋಪಿಗಳ ಪರ ಶ್ರೀ ಎಸ್.ಎಸ್.ಜೆ, ವಕೀಲರಿಂದಃ**

2013 ರಲ್ಲಿ ನಾನು ಹಾಸನದ ಹೇಮಾವತಿ ನಾಲಾ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೆನು. ಮೂಲ ದಾವೆ ಸಂಖ್ಯೆ 319/2013 ರ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಹುರಾ ಗ್ರಾಮದಿಂದ ಬಿರ್ವಾಳು ಗ್ರಾಮದವರೆಗೆ ಕಾಲುವೆ ಪಕ್ಕದ ಬಾಜುದಾರರು ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿದ್ದಾರೆ ಎಂದರೆ ಕೆಲವರು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿದ್ದಾರೆ. ಸರ್ವೆ ನಂ. 126 ರ ಜಮೀನಿನ ಮಾಲೀಕರು ಸರ್ವೆ ನಂ. 127 ರಲ್ಲಿರುವ ಸರ್ಕಾರಿ ರಸ್ತೆಯನ್ನು ಒತ್ತುವರಿ ಮಾಡಿಕೊಂಡಿರುತ್ತಾರೆಂದು ಲೋಕಾಯುಕ್ತ ಕಛೇರಿಗೆ ದೂರು ನೀಡಿದ್ದರು. ಸರ್ವೆ ನಂ.126 ಮತ್ತು 127 ರ ಮಧ್ಯೆ ಸರ್ಕಾರಿ ಓಣಿ ಇರುವ ಬಗ್ಗೆ ನಕ್ಷೆಯಲ್ಲಿ ತೋರಿಸಿರುತ್ತಾರೆ ಎಂದರೆ ಅದರ ಬಗ್ಗೆ ನನಗೆ ಮಾಹಿತಿ ಇಲ್ಲ, ಆದರೆ ಅಲ್ಲಿ ಮೇಲ್ನೋಟಕ್ಕೆ ಯಾವುದೇ ರಸ್ತೆಯಿರಲಿಲ್ಲ. ನಾನು ರಾಜಕೀಯ ಪ್ರೇರಿತನಾಗಿ ಈ ದೂರು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳು ಯಾವುದೇ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿಲ್ಲ ಹಾಗೂ ಯಾವುದೇ ಸರ್ವೆ ಕಲ್ಲನ್ನು ಕಿತ್ತು ಹಾಕಿರುವುದಿಲ್ಲ ಎಂದರೆ ಸರಿಯಲ್ಲ. ಸರ್ವೆ ನಂ. 127 ರ ಸುತ್ತಾಮುತ್ತಲಿನ ರೈತರಿಗೆ ಬೇರೆ ಸರ್ಕಾರಿ ರಸ್ತೆಯಿದ್ದು, ನಾನು ಹೇಳಿರುವಂತಹ ರಸ್ತೆ

**ಪಿ.ಡಬ್ಲೂ-1**

ಇರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗಳು ನಮಗೆ ಸೇರಿದ ಪಿತ್ರಾರ್ಜಿತ ಆಸ್ತಿಯಲ್ಲಿ ಮಾತ್ರ ವ್ಯವಸಾಯ ಮಾಡುತ್ತಿದ್ದು, ಯಾವುದೇ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡು ಬೌಂಡರಿ ಕಲ್ಲನ್ನು ಕಿತ್ತುಹಾಕಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗಳು ತಮ್ಮ ಜಮೀನಿನಲ್ಲಿ ಬೆಳೆದಿದ್ದ ಸುಮಾರು ರೂ. 5-6 ಲಕ್ಷದ ಬಾಳೆ ಬೆಳೆಯನ್ನು ಜೆ.ಸಿ.ಬಿ ಯಂತ್ರದಿಂದ ನಾಶಪಡಿಸಿರುತ್ತೇವೆ ಎಂದರೆ ಸರಿಯಲ್ಲ. ಕಾಲುವೆ ಪಕ್ಕವಿರುವ ದಾರಿಯನ್ನು ಯಾರು ಒತ್ತುವರಿ ಮಾಡಿಕೊಂಡಿರುತ್ತಾರೋ ಅದಕ್ಕೆ ಸಂಬಂಧಿಸಿದಂತೆ ಪತ್ರ ವ್ಯವಹಾರ ಮಾಡಿರುತ್ತೇನೆ. ಸದರಿ ಪತ್ರಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ನಾನು ಕೊಟ್ಟಿರುವ ದೂರಿಗೂ ಮತ್ತು ಆರೋಪಿಗಳಿಗೂ ಯಾವುದೇ ಸಂಬಂಧವಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗಳ ಪರವಾಗಿ ಅವರ ಜಮೀನಿಗೆ ಸಂಬಂಧಿಸಿದಂತೆ ನಮ್ಮ ಇಲಾಖೆ ಹಾಗೂ ಸರ್ವೆ ನಂ.126 ರ ಮಾಲೀಕರ ವಿರುದ್ಧ ಶಾಶ್ವತ ನಿರ್ಬಂಧಕಾಜ್ಞೆ ಆದೇಶವಾಗಿರುತ್ತದೆ ಎಂದರೆ ಅದರ ಬಗ್ಗೆ ನನಗೆ ಮಾಹಿತಿ ಇಲ್ಲ. ಮುದ್ದೆ ಮಾಲಿಗೂ, ಆರೋಪಿಗಳಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ:** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**